# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಸರ್ಕಾರಿ ವಿಮಾ ಇಲಾಖೆಯ ಕಡ್ಡಾಯ ಜೀವ ವಿಮಾ ಯೋಜನೆಯಡಿ ದಿನಾಂಕ: 01.04.2008 ರಿಂದ 31.03.2010ಕ್ಕೆ ಅಂತ್ಯಗೊಂಡ ದ್ವೈವಾರ್ಷಿಕ ಅವಧಿಗೆ ಮೌಲ್ಯಮಾಪನ ವರದಿಯ ಆಧಾರದ ಮೇಲೆ ಜೀವ ವಿಮಾ ಪಾಲಿಸಿಗಳ ಸ್ಥಿರಪಡಿಸಿದ ಮೊತ್ತದ ಮೇಲೆ ಬೋನಸ್ ನೀಡಲು ಸರ್ಕಾರದ ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ: ಕೆಜಿಐಡಿ/ಎವಿಜಿ/2008-10-ವಿ.ಮೌ.ಮಾ/373/2013-14, ದಿನಾಂಕ: 03.09.2013.

ಪ್ರಸ್ತಾವನೆ:

ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ ಇವರು ಮೇಲೆ ಓದಲಾದ ದಿನಾಂಕ 03.09.2013 ರ ಪತ್ರದಲ್ಲಿ 2008-2010 ನೇ ದ್ವೈವಾರ್ಷಿಕ ಅವಧಿಯ ಕಡ್ಡಾಯ ಜೀವ ವಿಮಾ ಪಾಲಿಸಿಗಳ ಮೌಲ್ಯ ಮಾಪನ ಮಾಡಿದ ವಿಮಾ ಗಣಕರ ವರದಿಯನ್ನು ಕಳುಹಿಸಿ, ಅದನ್ನು ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿಯನ್ನು ಕೋರಿರುತ್ತಾರೆ. ಮೌಲ್ಯಮಾಪನ ವರದಿಯ ಪ್ರಮುಖ ಅಂಶಗಳು ಕೆಳಕಂಡಂತಿದೆ.

| | |
|---|---|
| 1. ಚಾಲ್ತಿಯಲ್ಲಿದ್ದ ಪಾಲಿಸಿಗಳು | : ಸಂಖ್ಯೆ: 11,28,709 |
| 2. ವಿಮಾ ಭರವಸೆ ಮೊತ್ತ | : ರೂ. 8809.26 ಕೋಟಿಗಳು |
| 3. ಪ್ರತ್ಯಾವರ್ತಿ ಅಧಿಲಾಭಾಂಶ | : ರೂ. 3760.40 ಕೋಟಿಗಳು |
| 4. ವಾರ್ಷಿಕ ಪ್ರೀಮಿಯಂ | : ರೂ. 429.48 ಕೋಟಿಗಳು |
| 5. ಜೀವ ವಿಮಾ ನಿಧಿಯ ಶಿಲ್ಕು | : ರೂ. 4646.36 ಕೋಟಿಗಳು |
| 6. ವಿಮಾ ವ್ಯವಹಾರದ ಮೇಲಿನ ನಿವ್ವಳ ಹೊಣೆಗಾರಿಕೆ | : ರೂ. 3681.60 ಕೋಟಿಗಳು |
| 7. ಮೌಲ್ಯಮಾಪನದ ಹೆಚ್ಚುವರಿ (Surplus) | : ರೂ. 964.76 ಕೋಟಿಗಳು |

ಆದುದರಿಂದ ದಿನಾಂಕ 31.03.2010 ರಂದು ಚಾಲ್ತಿಯಲ್ಲಿರುವ ಎಲ್ಲಾ ಪಾಲಿಸಿಗಳಿಗೆ ಪ್ರತಿ ಸಾವಿರ ವಿಮಾ ಮೊತ್ತಕ್ಕೆ ಪ್ರತಿ ವರ್ಷಕ್ಕೆ ರೂ.87/- ರಂತೆ ಪ್ರತ್ಯಾವರ್ತಿ ಲಾಭಾಂಶವನ್ನು ಒಟ್ಟು ರೂ.766.40 ಕೋಟಿಗಳಲ್ಲಿ ವಿತರಣೆ ಮಾಡಲು ಹಾಗೂ ಉಳಿದ 198.36 ಕೋಟಿ ಮೊತ್ತವನ್ನು ಮುಂದಿನ ಮೌಲ್ಯಮಾಪನ ಅವಧಿಗೆ ಕೊಂಡೊಯ್ಯಲು ವಿಮಾ ಗಣಕರು ಶಿಫಾರಸ್ಸು ಮಾಡಿರುತ್ತಾರೆ.

ಮುಂದುವರೆದು, ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ, ಇವರು ಮೇಲಿನ ಅಂಶಗಳ ಆಧಾರದ ಮೇಲೆ ದಿನಾಂಕ: 31.03.2010 ರಂದು ಚಾಲ್ತಿಯಲ್ಲಿದ್ದ ಪಾಲಿಸಿಗಳ ಮೇಲೆ ವಿಮಾ ಮೊತ್ತದ ಪ್ರತಿ 1000/- ರೂ.ಗಳಿಗೆ ವಾರ್ಷಿಕ 87/-ರೂ. ದರದಲ್ಲಿ ಬೋನಸ್ ನೀಡುವುದರ ಜೊತೆಗೆ ದಿನಾಂಕ: 01.04.2010 ರಿಂದ 31.03.2012 ಅವಧಿಯಲ್ಲಿ ಅವಧಿಪೂರ್ಣ, ಮರಣಜನ್ಯ, ವಿಮಾತ್ಯಾಗ ಆದ ಪಾಲಿಸಿಗಳಿಗೂ ಸಹ ಮುಂದಿನ ಮೌಲ್ಯಮಾಪನ ದಿನಾಂಕದವರೆಗೆ ಪ್ರತಿ 1000/-ರೂ.ಗಳಿಗೆ ವಾರ್ಷಿಕ 87/- ರೂ. ಮಧ್ಯಂತರ ಲಾಭಾಂಶವನ್ನು ನೀಡಲು ವಿಮಾ ಗಣಕರು ಶಿಫಾರಸ್ಸು ಮಾಡಿರುತ್ತಾರೆಂದು ತಿಳಿಸಿ, ಈ ಕೆಳಕಂಡ ಪ್ರಸ್ತಾವನೆಗಳಿಗೆ ಸರ್ಕಾರದ ಆದೇಶವನ್ನು ನೀಡಬೇಕೆಂದು ನಿರ್ದೇಶಕರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

1) ದಿನಾಂಕ: 01-04-2008 ರಿಂದ 31-03-2010ರ ದ್ವೈವಾರ್ಷಿಕ ಮೌಲ್ಯಮಾಪನ ಅವಧಿಯಲ್ಲಿ ಚಾಲ್ತಿಯಲ್ಲಿದ್ದ ಎಲ್ಲಾ ಪಾಲಿಸಿಗಳಿಗೆ ಹಾಗೂ ಚಾಲ್ತಿಯಲ್ಲಿದ್ದ ಪ್ರತಿ ತಿಂಗಳ ಅವಧಿಯನ್ನು ಒಳಗೊಂಡಂತೆ ಪಾಲಿಸಿಗಳ ಸ್ಥಿರಪಡಿಸಿದ ವಿಮಾ ಮೊತ್ತದ ಮೇಲೆ ಪ್ರತಿ ಸಾವಿರ ರೂ.ಗಳಿಗೆ ಪ್ರತಿ ವರ್ಷಕ್ಕೆ ರೂ.87/- ರಂತೆ ಸರಳ ಪ್ರತ್ಯಾವರ್ತಿ ಲಾಭಾಂಶ (ಸಿಂಪಲ್ ರಿವರ್ಷನರಿ ಬೋನಸ್) ಘೋಷಿಸುವುದು.

...2...

2) ಅವಧಿಪೂರ್ಣ, ಮರಣಜನ್ಯ ಹಾಗೂ ವಿಮಾ ತ್ಯಾಗ ಮೌಲ್ಯಗಳಿಂದ ದಿನಾಂಕ: 01-04-2010 ರಿಂದ 31-03-2012ರ ಅವಧಿಯಲ್ಲಿ ಹೊರ ಹೋಗಿರುವ ವಿಮಾ ಪಾಲಿಸಿಗಳಿಗೆ ಪ್ರತಿ ಸಾವಿರ ರೂ. ವಿಮಾ ಮೊತ್ತಕ್ಕೆ ಪ್ರತಿ ವರ್ಷಕ್ಕೆ ರೂ. 87/- ರಂತೆ ಮಧ್ಯಂತರ ಲಾಭಾಂಶವನ್ನು (ಇಂಟೀರಿಯಮ್ ಬೋನಸ್) ಘೋಷಿಸುವುದು.

ಈ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 27 ಕವಿಇ 2013, ಬೆಂಗಳೂರು, ದಿನಾಂಕ: 08-11-2013.**

2008-2010ರ ದ್ವೈವಾರ್ಷಿಕ ಅವಧಿಯ ವಿಮಾ ಗಣನಾ ವರದಿ ಹಾಗೂ ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ, ಇವರ ಶಿಫಾರಸ್ಸನ್ನು ವಿವರವಾಗಿ ಪರಿಶೀಲಿಸಿ ಕೆಳಕಂಡ ಅಂಶಗಳಿಗೆ ಸರ್ಕಾರದ ಮಂಜೂರಾತಿ ನೀಡಲಾಗಿದೆ.

i) ದಿನಾಂಕ: 31.03.2010ರಂದು ಚಾಲ್ತಿಯಲ್ಲಿದ್ದ ಎಲ್ಲಾ ಪಾಲಿಸಿಗಳಿಗೆ 2008-2010ರ ದ್ವೈವಾರ್ಷಿಕ ಅವಧಿಯಲ್ಲಿ ವಿಮಾ ಮೊತ್ತದ ಪ್ರತಿ 1000/-ರೂ. ಗಳಿಗೆ ವಾರ್ಷಿಕ 87/- ರೂ. ಬೋನಸ್ಸ್ ನೀಡುವುದು.

ii) ದಿನಾಂಕ: 01.04.2010 ರಿಂದ 31.03.2012ರ ಅವಧಿಯಲ್ಲಿ ಅವಧಿಪೂರ್ಣ, ಮರಣ ಜನ್ಯ ಹಾಗೂ ವಿಮಾ ತ್ಯಾಗ ಮೌಲ್ಯಗಳಿಂದ ಹೊರಹೋಗಿರುವ ವಿಮಾ ಪಾಲಿಸಿಗಳಿಗೆ ಮುಂದಿನ ಮೌಲ್ಯಮಾಪನ ದಿನಾಂಕದವರೆಗೆ ಪ್ರತಿ ರೂ.1000/-ಕ್ಕೆ ವಾರ್ಷಿಕ 87/- ರೂ. ಮಧ್ಯಂತರ ಬೋನಸ್ಸನ್ನು ನೀಡುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಎನ್. ಲಕ್ಷ್ಮಣ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಆಡಳಿತ ಮತ್ತು ಮುಂಗಡಗಳು).

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು-ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ ಮುದ್ರಿತ 100 ಪ್ರತಿಗಳನ್ನು ಆರ್ಥಿಕ ಇಲಾಖೆಯ ಮುಂಗಡ ಶಾಖೆಗೆ ಕಳುಹಿಸುವಂತೆ ಕೋರಿದೆ.

ಪ್ರತಿಯನ್ನು:

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ತನಿಖೆ), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
4. ಎಲ್ಲಾ ಉಪ ನಿರ್ದೇಶಕರುಗಳಿಗೆ/ಎಲ್ಲಾ ಜಿಲ್ಲಾ ವಿಮಾಧಿಕಾರಿಗಳಿಗೆ - ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ, ಬೆಂಗಳೂರು, ಇವರ ಮುಖಾಂತರ.
5. ಸರ್ಕಾರದ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ-ಪ್ರಕರಣ ಸಂಖ್ಯೆ: ಸಿ. 711/2013, ದಿನಾಂಕ: 30.10.2013ರನ್ವಯ ಮಾಹಿತಿಗಾಗಿ.
6. ಶಾಖಾಧಿಕಾರಿ, ಆರ್ಥಿಕ ಇಲಾಖೆ (ಗಣಕ ಕೋಶ),-ಆರ್ಥಿಕ ಇಲಾಖೆಯ ವೆಬ್‌ಸೈಟಿನಲ್ಲಿ ಅಪ್‌ಲೋಡ್ ಮಾಡುವ ಸಲುವಾಗಿ.
7. ಶಾಖಾರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.